Akashvani : Bangalore
National Bulletin In Kannada
13.05.2025 : 7.35 am
**ಆಕಾಶವಾಣಿ ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
13.05.2025 : 7.35 am
*****

**ಮುಖ್ಯಾಂಶಗಳು**

1. ಆಪರೇಷನ್ ಸಿಂಧೂರ್ ಕೇವಲ ಹೆಸರಲ್ಲ, ಬದಲಾಗಿ ದೇಶದ ಸಾಮೂಹಿಕ ಭಾವನೆ - ಪ್ರಧಾನಿ ನರೇಂದ್ರ ಮೋದಿ

2. ಭಾರತ ಪರಮಾಣು ಬೆದರಿಕೆಗೆ ಅಂಜುವುದಿಲ್ಲ, ಹಾಗೆಯೇ ಅದನ್ನು ಸಹಿಸುವುದಿಲ್ಲ - ಪ್ರಧಾನಿ

3. ಭಾರತ ಮತ್ತು ಪಾಕಿಸ್ತಾನದ ನಡುವೆ ಮಿಲಿಟರಿ ಕಾರ್ಯಾಚರಣೆಯ ಮಹಾನಿರ್ದೇಶಕರ - ಡಿಜಿಎಂಓ ಮಟ್ಟದ ಮಾತುಕತೆ

4. ಇಂಡಿಯನ್ ಪ್ರೀಮಿಯರ್ ಲೀಗ್ ೨೦೨೫ ರ ಉಳಿದ ಪಂದ್ಯಗಳು ಇದೇ ೧೭ ರಿಂದ ಪುನರಾರಂಭ

******

ಅಪರೇಷನ್ ಸಿಂಧೂರ ಕಾರ್ಯಚರಣೆಯ ತಾತ್ಕಾಲಿಕ ಸ್ಥಗಿತ ಒಂದು ಸಮಾಪ್ತಿಯ ನಿರ್ಧಾರವಲ್ಲ, ಮುಂಬರುವ ದಿನಗಳಲ್ಲಿ ಪಾಕಿಸ್ತಾನ ತನ್ನ ಬದ್ಧತೆಗೆ ಅನುಗುಣವಾಗಿ ಮುಂದಿನ ಕ್ರಮಗಳನ್ನು ಅನುಸರಿಸುತ್ತದೆಯೇ ಎಂಬುದನ್ನು ಭಾರತ ಪರಿಶೀಲಿಸಲಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹೇಳಿದ್ದಾರೆ. ಕಳೆದ ರಾತ್ರಿ ರಾಷ್ಟ್ರವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ನರೇಂದ್ರ ಮೋದಿಯವರು ಆಪರೇಷನ್ ಸಿಂಧೂರ ಆರಂಭದ ಮೂರನೇ ದಿನದಲ್ಲೇ ಪಾಕಿಸ್ತಾನ ತನ್ನ ನಿರೀಕ್ಷೆಗಿಂತ ಹೆಚ್ಚು ನಷ್ಟವನ್ನು ಅನುಭವಿಸಿದೆ. ಭಾರತೀಯ ಸಶಸ್ತ್ರ ಪಡೆಗಳು ನಡೆಸಿದ ಆಪರೇಷನ್ ಸಿಂಧೂರ್ ಕೇವಲ ಹೆಸರಲ್ಲ, ಬದಲಾಗಿ ದೇಶದ ಸಾಮೂಹಿಕ ಭಾವನೆಗಳು ಮತ್ತು ಸ್ಥಿತಿಸ್ಥಾಪಕತ್ವದ ಪ್ರಬಲ ಸಂಕೇತವಾಗಿದೆ. ಆಪರೇಷನ್ ಸಿಂಧೂರ ನ್ಯಾಯಕ್ಕಾಗಿ ಅಚಲ ಪ್ರತಿಜ್ಞೆಯಾಗಿದೆ. ಆಪರೇಷನ್ ಸಿಂಧೂರ ಭಯೋತ್ಪಾದನೆಯ ವಿರುದ್ಧದ ಹೋರಾಟವನ್ನು ಮರು ವ್ಯಾಖ್ಯಾನಿಸಿದೆ ಮತ್ತು ಹೊಸ ಮಾನದಂಡ ಮತ್ತು ಹೊಸ ಸಾಮಾನ್ಯತೆಯನ್ನು ಸ್ಥಾಪಿಸಿದೆ ಎಂದು ಅವರು ಹೇಳಿದರು. ಭಾರತದ ಭದ್ರತಾ ನೀತಿಯ ಮೂರು ಪ್ರಮುಖ ಸ್ತಂಭಗಳನ್ನು ವಿವರಿಸಿದ ಪ್ರಧಾನಿ, ಭಯೋತ್ಪಾದನೆಗೆ ನಿರ್ಣಾಯಕ ಪ್ರತೀಕಾರವೇ ಅದರ ಮೊದಲ ಸ್ತಂಭವಾಗಿದೆ. ಭಾರತದ ಮೇಲಿನ ಯಾವುದೇ ಭಯೋತ್ಪಾದಕ ದಾಳಿಗೆ ಬಲವಾದ ಮತ್ತು ದೃಢವಾದ ಪ್ರತಿಕ್ರಿಯೆ ನೀಡಲಾಗುವುದು ಎಂದು ಹೇಳಿದರು. ಭಾರತ ಪರಮಾಣು ಬೆದರಿಕೆಗಳಿಗೆ ಅಂಜುವುದಿಲ್ಲ. ಇನ್ನು ಮುಂದೆ ಯಾವುದೇ ಪರಮಾಣು ಬೆದರಿಕೆಯನ್ನು ಸಹಿಸದಿರುವುದು ಎರಡನೆಯ ಸ್ತಂಭವಾಗಿದೆ. ಭಯೋತ್ಪಾದನಾ ಚಟುವಟಿಕೆಗಳ ಪ್ರಾಯೋಜಕರು ಮತ್ತು ಭಯೋತ್ಪಾದಕರ ನಡುವೆ ಯಾವುದೇ ವ್ಯತ್ಯಾಸವಿಲ್ಲ. ಇದುವೇ ಮೂರನೇ ಸ್ಥಂಭ ಎಂದು ಹೇಳಿದ ಅವರು, ಭಯೋತ್ಪಾದಕರಿಗೆ ಆಶ್ರಯ ನೀಡುವ ಮತ್ತು ರಕ್ಷಿಸುವವರನ್ನು ಭಯೋತ್ಪಾದಕರಿಂದ ಭಿನ್ನವಾಗಿ ನೋಡಲಾಗುವುದಿಲ್ಲ ಎಂದರು.

ಧ್ವನಿ - ಪ್ರಧಾನಿ - ೫೭ ಸೆಕೆಂಡ್ಸ್

ಹಾಗೆಯೇ ರಕ್ತ ಮತ್ತು ನೀರು ಒಟ್ಟಿಗೆ ಹರಿಯಲಾರವು ಎಂದು ಪ್ರದಾನ ಮಂತ್ರಿಯವರು ತಮ್ಮ ಭಾಷಣದಲ್ಲಿ ತಿಳಿಸಿದ್ದಾರೆ. ಭಾರತದ ಏಕತೆಯೇ ಅದರ ಶಕ್ತಿಯ ಮೂಲವಾಗಿದೆ. ಯುದ್ಧದ ಕಾಲವಲ್ಲದ ಈ ಯುಗದಲ್ಲಿ ಭಯೋತ್ಪಾದನೆಗೂ ಅವಕಾಶವಿಲ್ಲ. ಅದರ ವಿರುದ್ಧ ಶೂನ್ಯ ಸಹಿಷ್ಣುತೆಯೇ ಉತ್ತಮ ಹಾಗೂ ಸುರಕ್ಷಿತ ಭವಿಷ್ಯಕ್ಕೆ ಖಾತ್ರಿ ಎಂದರು.

ಧ್ವನಿ _ ಪ್ರಧಾನಿ ನರೇಂದ್ರ ಮೋದಿ - ೩೭ ಸೆಕೆಂಡ್ಸ್

ಪಾಕಿಸ್ತಾನ ತನ್ನ ಭಯೋತ್ಪಾದಕ ಮೂಲಸೌಕರ್ಯವನ್ನು ನಾಶಪಡಿಸಬೇಕು. ಪಾಕಿಸ್ತಾನ ಸೇನೆ ಮತ್ತು ಪಾಕಿಸ್ತಾನ ಸರ್ಕಾರ ಭಯೋತ್ಪಾದನೆಯನ್ನು ಪೋಷಿಸುವುದನ್ನು ಮುಂದುವರಿಸಿದರೆ, ಒಂದು ದಿನ ಅದು ಪಾಕಿಸ್ತಾನದ ಸ್ವಂತ ವಿನಾಶಕ್ಕೆ ಕಾರಣವಾಗುತ್ತದೆ ಎಂದು ಅವರು ಎಚ್ಚರಿಸಿದರು. ಭಾರತ ಮತ್ತು ಪಾಕಿಸ್ತಾನದ ನಡುವೆ ಮಾತುಕತೆ ನಡೆದರೆ, ಅದು ಭಯೋತ್ಪಾದನೆ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರ-ಪಿಒಕೆ ಬಗ್ಗೆ ಮಾತ್ರ ಎಂದು ಪ್ರಧಾನಿ ಮೋದಿ ತಮ್ಮ ಭಾಷಣದಲ್ಲಿ ಸ್ಪಷ್ಟಪಡಿಸಿದರು. ಇದೇ ವೇಳೆ ಭಾರತದ ಸೇನೆ, ಗುಪ್ತಚರ ಸಂಸ್ಥೆಗಳು ಮತ್ತು ವಿಜ್ಞಾನಿಗಳಿಗೆ ಗೌರವ ಸೂಚಿಸಿದ ಪ್ರಧಾನಿ, ಈ ಕಾರ್ಯಾಚರಣೆಯಲ್ಲಿ ತೊಡಗಿದ ಸಶಸ್ತ್ರ ಪಡೆಗಳ ಧೈರ್ಯ ಹಾಗೂ ಶೌರ್ಯವನ್ನು ದೇಶದ ತಾಯಂದಿರು, ಸಹೋದರಿಯರು ಮತ್ತು ಪುತ್ರಿಯರಿಗೆ ಅರ್ಪಿಸಿದರು.

******

ಭಾರತೀಯ ಸಶಸ್ತ್ರ ಪಡೆಗಳ ಅಸಾಧಾರಣ ಶೌರ್ಯಕ್ಕೆ ಗೃಹ ಸಚಿವ ಅಮಿತ್ ಶಾ ನಮನ ಸಲ್ಲಿಸಿದ್ದಾರೆ. ಸೇನೆಯನ್ನು ದೇಶದ ಕವಚ ಮತ್ತು ಶತ್ರುಗಳ ನಾಶಕರನೆಂದು ಅವರು ಬಣ್ಣಿಸಿದ್ದಾರೆ. ಸಾಮಾಜಿಕ ಜಾಲತಾಣದ ಸಂದೇಶದಲ್ಲಿ ಅವರು, ಪಹಲ್ಗಾಂ ಉಗ್ರ ದಾಳಿಯಲ್ಲಿ ಮೃತಪಟ್ಟವರಿಗೆ ನ್ಯಾಯ ಒದಗಿಸಿದ ಹಿನ್ನೆಲೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮಾದರಿ ನಾಯಕತ್ವವನ್ನು ಅಮಿತ್ ಶಾ ಶ್ಲಾಘಿಸಿದ್ದಾರೆ. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಕೂಡ ಪ್ರಧಾನಮಂತ್ರಿ ಮೋದಿ ಅವರು ರಾಷ್ಟ್ರವನ್ನುದ್ದೇಶಿಸಿ ಮಾಡಿದ ಭಾಷಣವನ್ನು ಶ್ಲಾಘಿಸಿದ್ದಾರೆ ಮತ್ತು ಅದು ಪ್ರೇರಣಾದಾಯಕವಾಗಿದೆ ಎಂದು ಹೇಳಿದ್ದಾರೆ. ಕೇಂದ್ರ ಸಚಿವರು ಮತ್ತು ಬಿಜೆಪಿ ಅಧ್ಯಕ್ಷ ಜಗತ್ ಪ್ರಕಾಶ್ ನಡ್ಡಾ ಕೂಡ ಪ್ರಧಾನಿ ಮೋದಿ ಅವರ ಭಾಷಣವನ್ನು ಶ್ಲಾಘಿಸಿದ್ದಾರೆ. ಸಾಮಾಜಿಕ ಜಾಲತಾಣದ ಮೂಲಕ ನೀಡಿದ ಪ್ರತಿಕ್ರಿಯೆಯಲ್ಲಿ ಅವರು, ಇದು ಪಾಕಿಸ್ತಾನ ಮತ್ತು ಭಯೋತ್ಪಾದನೆಯ ವಿರುದ್ಧ ಭಾರತದ ಅಚಲ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. "ಆಪರೇಷನ್ ಸಿಂಧೂರ್ ಮೂಲಕ ಪ್ರಧಾನಮಂತ್ರಿ ಮತ್ತೆ ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿದ್ದಾರೆ ಎಂದು ತಿಳಿಸಿದ್ದಾರೆ.

******

ಭಾರತ ಮತ್ತು ಪಾಕಿಸ್ತಾನದ ನಡುವೆ ಕಳೆದ ರಾತ್ರಿ ಮಿಲಿಟರಿ ಕಾರ್ಯಾಚರಣೆಯ ಮಹಾನಿರ್ದೇಶಕರ - ಡಿಜಿಎಂಒ ಮಟ್ಟದ ಮಾತುಕತೆ ನಡೆಯಿತು. ಎರಡೂ ಕಡೆಯವರು ಒಂದೇ ಒಂದು ಗುಂಡು ಹಾರಿಸಬಾರದು ಅಥವಾ ಪರಸ್ಪರರ ವಿರುದ್ಧ ಯಾವುದೇ ಆಕ್ರಮಣಕಾರಿ ಮತ್ತು ಪ್ರತಿಕೂಲ ಕ್ರಮವನ್ನು ಪ್ರಾರಂಭಿಸಬಾರದು ಎಂಬ ಬದ್ಧತೆಯನ್ನು ಮುಂದುವರಿಸುವುದಕ್ಕೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸಲಾಯಿತು ಎಂದು ಭಾರತೀಯ ಸೇನೆಯು ಹೇಳಿಕೆಯಲ್ಲಿ ತಿಳಿಸಿದೆ. ಗಡಿಗಳು ಮತ್ತು ಮುಂಚೂಣಿ ಪ್ರದೇಶಗಳಿಂದ ಸೈನ್ಯವನ್ನು ಕಡಿಮೆ ಮಾಡುವುದನ್ನು ಖಚಿತಪಡಿಸಿಕೊಳ್ಳಲು ಎರಡೂ ಕಡೆಯವರು ತಕ್ಷಣದ ಕ್ರಮಗಳನ್ನು ಪರಿಗಣಿಸಲು ಸಹ ಒಪ್ಪಿಕೊಂಡರು.

******

ಜಮ್ಮು ಮತ್ತು ಕಾಶ್ಮೀರದಲ್ಲಿ, ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಜಮ್ಮುವಿನ ಆಶ್ರಯ ಕೇಂದ್ರ ಮತ್ತು ವಾಸತಿ ಕೇಂದ್ರಕ್ಕೆ ಭೇಟಿ ನೀಡಿ, ಪಾಕಿಸ್ತಾನದಿಂದ ನಡೆದ ಗಡಿದಾಳಿ ಪೀಡಿತರಾದ ಕುಟುಂಬಗಳನ್ನು ಭೇಟಿಯಾದರು. ಭಾರತದ ಸರ್ಕಾರ ಹಾಗೂ ಕೇಂದ್ರಾಡಳಿತ ಪ್ರದೇಶದ ಆಡಳಿತ ಅವರ ಸುರಕ್ಷತೆಗೆ ಬದ್ಧವಾಗಿದೆ ಎಂಬುದನ್ನು ಅವರು ಪುನರುಚ್ಚರಿಸಿದರು. ಮುಖ್ಯಮಂತ್ರಿ ಓಮರ್ ಅಬ್ದುಲ್ಲಾ ಅವರು ಪೂಂಚ್ ಜಿಲ್ಲೆಯ ಪ್ರವಾಸ ಕೈಗೊಂಡು ಇತ್ತೀಚಿನ ಗಡಿಯಲ್ಲಿ ನಡೆದ ಗುಂಡಿನ ಚಕಮಕಿ ನಂತರದ ನೆಲೆಯ ಪರಿಸ್ಥಿತಿಯನ್ನು ಪರಿಶೀಲಿಸಿದರು.

******

ಆಪರೇಷನ್ ಸಿಂಧೂರ ಯಶಸ್ಸಿನ ನಂತರ ಬಿಜೆಪಿ ಇಂದಿನಿಂದ ದೇಶಾದ್ಯಂತ ೧೧ ದಿನಗಳ ಕಾಲ ತಿರಂಗ ಯಾತ್ರೆಯನ್ನು ಆಯೋಜಿಸಲಿದೆ. ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ದೃಢನಿಶ್ಚಯದ ನಾಯಕತ್ವ ಮತ್ತು ಸಶಸ್ತ್ರ ಪಡೆಗಳ ಶೌರ್ಯದ ಬಗ್ಗೆ ಜನರಿಗೆ ತಿಳಿಸುವ ಭಾಗವಾಗಿ ಇದನ್ನು ಆಯೋಜಿಸಲಾಗಿದೆ. ಈ ತಿಂಗಳ ೨೩ ರವರೆಗೆ ನಡೆಯಲಿರುವ ಈ ಅಭಿಯಾನದಲ್ಲಿ ಮಾಜಿ ಸೈನಿಕರು ಮತ್ತು ಸಾಮಾಜಿಕ ಕಾರ್ಯಕರ್ತರು ಭಾಗವಹಿಸಲಿದ್ದಾರೆ. ಈ ಅಭಿಯಾನದ ಉದ್ದೇಶವು ರಾಜಕೀಯವಾಗಿರುವುದಿಲ್ಲ ಆದರೆ ಸಮಾಜದ

ಎಲ್ಲಾ ವರ್ಗಗಳಿಂದ ಬೆಂಬಲವನ್ನು ಪಡೆದಿರುವ ವಿಷಯದ ಬಗ್ಗೆ ಜನರನ್ನು ಹುರಿದುಂಬಿಸುವ ಸಲುವಾಗಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ.

******

ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಇಂದು ರಾಯ್‌ಪುರದಲ್ಲಿ ಛತ್ತೀಸ್‌ಗಢ ಸರ್ಕಾರದಿಂದ ಕೇಂದ್ರ ಯೋಜನೆಗಳ ಅನುಷ್ಠಾನವನ್ನು ಪರಿಶೀಲಿಸಲಿದ್ದಾರೆ. ಅದಕ್ಕೂ ಮೊದಲು, ಕೇಂದ್ರ ಸಚಿವರು ಸಚಿವಾಲಯದ ಆವರಣದಲ್ಲಿ ಸಸಿ ನೆಡಲಿದ್ದಾರೆ. ನಂತರ, ಅಂಬಿಕಾಪುರಕ್ಕೆ ತೆರಳಲಿರುವ ಅವರು, ಪಿಜಿ ಕಾಲೇಜು ಮೈದಾನದಲ್ಲಿ ಆಯೋಜಿಸಲಾದ "ಮೋರ್ ಆವಾಸ್ ಮೋರ್ ಅಧಿಕಾರ್" ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ  ಅವರು ಪ್ರಧಾನ ಮಂತ್ರಿ ಆವಾಸ್ ಯೋಜನೆ, ಗ್ರಾಮೀಣ ಮತ್ತು ಪ್ರಧಾನ ಮಂತ್ರಿ ಜನ್ಮಾನ್ ಫಲಾನುಭವಿಗಳಿಗೆ ಕೀಲಿಗಳನ್ನು ಹಸ್ತಾಂತರಿಸಲಿದ್ದಾರೆ.

******

ಇಂಡಿಯನ್ ಪ್ರೀಮಿಯರ್ ಲೀಗ್  ೨೦೨೫ ರ ಉಳಿದ ಪಂದ್ಯಗಳು ಇದೇ ಶನಿವಾರ ೧೭ ರಿಂದ ಪುನರಾರಂಭವಾಗಲಿವೆ.  ದೇಶದ ೬ ಕಡೆ ಉಳಿದ ೧೭ ಪಂದ್ಯಗಳನ್ನು ನಡೆಸಲಾಗುತ್ತದೆ ಎಂದು ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಬಿಸಿಸಿಐ ತಿಳಿಸಿದೆ.  ಮೇ ೨೯ ರಂದು ಕ್ವಾಲಿಫೈಯರ್ ಮೊದಲ ಪಂದ್ಯ ನಡೆಯಲಿದ್ದು, ಜೂನ್ ೩ ರಂದು ಅಂತಿಮ ಪಂದ್ಯ ನಡೆಯಲಿದೆ.

******

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯಂತೆ  ಇಂದು ಪಶ್ಚಿಮ ಬಂಗಾಳ ಮತ್ತು ಜಾರ್ಖಂಡ್‌ನಲ್ಲಿ ಬಿಸಿಗಾಳಿ ವಾತಾವರಣವನ್ನು ನಿರೀಕ್ಷಿಸಲಾಗಿದೆ.

ಉಪ-ಹಿಮಾಲಯದ ಪಶ್ಚಿಮ ಬಂಗಾಳ, ತಮಿಳುನಾಡು, ಪುದುಚೇರಿ ಮತ್ತು ಬಿಹಾರದಲ್ಲಿ ಬಿಸಿ ಮತ್ತು ಆರ್ದ್ರ ವಾತಾವರಣ ಇರುವ ಸಾಧ್ಯತೆಯಿದೆ .ಉತ್ತರ ಪ್ರದೇಶದ ಪೂರ್ವದಲ್ಲಿ ರಾತ್ರಿಯ ವೇಳೆ ಬೆಚ್ಚಗಿನ ವಾತಾವರಣವಿರುತ್ತದೆ.

***END***